**ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ:30.05.2016ರಂದು ನೀರು ಶುದ್ಧೀಕರಣ ಘಟಕಗಳ ಅನುಷ್ಠಾನದ ಕುರಿತು ನಡೆದ ಪ್ರಗತಿ ಪರಿಶೀಲನಾ ಸಭೆಯ ನಡವಳಿಗಳು:**

**ಸಭೆಯಲ್ಲಿ ಹಾಜರಿದ್ದವರು :**

1. ಶ್ರೀಮತಿ ಡಾ॥ ಎನ್. ನಾಗಾಂಬಿಕಾ ದೇವಿ, ಐ.ಎ.ಎಸ್. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
2. ಶ್ರೀ ಎಂ. ಮಂಜುನಾಥ ನಾಯಕ್, ಐ.ಎ.ಎಸ್. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.
3. ಶ್ರೀ ಹೆಚ್.ಎಸ್. ಪ್ರಕಾಶ್ ಕುಮಾರ್, ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.
4. ಶ್ರೀ ಹೆಚ್.ಪಿ. ಪ್ರಕಾಶ್, ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಐ.ಡಿ.ಎಲ್ ಸಂಸ್ಥೆ.
5. ಶ್ರೀ ಬಿ. ಕೃಷ್ಣಪ್ಪ, ಸರ್ಕಾರದ ಉಪ-ಕಾರ್ಯದರ್ಶಿ (ಗ್ರಾನೀಸ), ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.
6. ಶ್ರೀ ವೈ. ಬಿ. ಹೊನ್ನಲಿಂಗಪ್ಪ, ಮುಖ್ಯ ಲೆಕ್ಕಾಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.
7. ಶ್ರೀ ಜಿ. ಕರಿಬಸಪ್ಪ, ಅಪರ ನಿಬಂಧಕರು, ಸಹಕಾರ ಇಲಾಖೆ ಹಾಗೂ ಇನ್ನಿತರೆ ಅಧಿಕಾರಿಗಳು / ಸಿಬ್ಬಂದಿಗಳು.

ದಿನಾಂಕ:30-05-2016ರಂದು ನಡೆದ ಸಭೆಯಲ್ಲಿ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ನೀರು ಶುದ್ಧೀಕರಣ ಘಟಕಗಳ ಅನುಷ್ಠಾನದ ಬಗ್ಗೆ ಪ್ರಗತಿ ಪರಿಶೀಲನೆ ನಡಸಿದರು. ಈ ಸಂದರ್ಭದಲ್ಲಿ ಮಾನ್ಯ ಸಚಿವರಿಗೆ ನೀರು ಶುದ್ಧೀಕರಣ ಘಟಕಗಳ ಅನುಷ್ಠಾನದ ವಿವರಗಳನ್ನು ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆರವರು ವಿವರಿಸುತ್ತಾ ಒಟ್ಟು **3217** ನೀರು ಶುದ್ಧೀಕರಣ ಘಟಕಗಳಿಗೆ ಟೆಂಡರ್ ಕರೆಯಲಾಗಿದ್ದು, ಈ ಪೈಕಿ **2455** ನೀರು ಶುದ್ಧೀಕರಣ ಘಟಕಗಳ ಟೆಂಡರ್‌ಗಳಿಗೆ ಅನುಮೋದನೆ ನೀಡಲಾಗಿರುತ್ತದೆ. ಉಳಿದ **762** ನೀರು ಶುದ್ಧೀಕರಣ ಘಟಕಗಳ ಮರು ಟೆಂಡರ್ ಪ್ರಕ್ರಿಯೆಯು ವಿವಿಧ ಹಂತದಲ್ಲಿ ಚಾಲನೆಯಲ್ಲಿರುತ್ತದೆ ಎಂದು ತಿಳಿಸಿದರು.

**ನೀರು ಶುದ್ಧೀಕರಣ ಘಟಕಗಳ ಅನುಷ್ಟಾನದಲ್ಲಿನ ಸಮಸ್ಯೆಗಳು:**

1. ಜಿಲ್ಲೆಗಳಿಂದ ಬ್ಯಾಂಕಿಗೆ ಸಲ್ಲಿಕೆಯಾಗುವ ಬಿಲ್ಲುಗಳನ್ನು ಜೇಷ್ಠತಾ ಆಧಾರದ ಮೇಲೆ ಪಾವತಿಸಲಾಗುತ್ತಿದ್ದು, ಯೋಜನೆಯ ಅನುಷ್ಠಾನಕ್ಕೆ ಬಿಡುಗಡೆ ಮಾಡಲಾಗಿರುವ / ಮಾಡಲಾಗುವ ಅನುದಾನವನ್ನು ಪ್ರತ್ಯೇಕವಾಗಿ ಬಿಡುಗಡೆ ಮಾಡಲು ಕ್ರಮ ವಹಿಸುವುದು. ಈಗಾಗಲೇ ಕಾರ್ಯಾಚರಣೆಯಲ್ಲಿರುವ ನೀರು ಶುದ್ಧೀಕರಣ ಘಟಕಗಳ ಮುಂದಿನ ನಿರ್ವಹಣೆಯ ಜವಾಬ್ದಾರಿಯನ್ನು ಗ್ರಾಮ ಪಂಚಾಯಿತಿಗಳಿಗೆ ವಹಿಸುವ ಬಗ್ಗೆ ಮತ್ತು ನೀರು ಶುದ್ಧೀಕರಣ ಘಟಕಗಳ ಅನುಷ್ಠಾನಕ್ಕೆ ಸಂಬಂಧಪಟ್ಟಂತೆ ದಿನಾಂಕ:01-06-2016ರಂದು ವೀಡೀಯೋ ಸಂವಾದ ಕಾರ್ಯಕ್ರಮವನ್ನು ಆಯೋಜಿಸಿ ಸೂಕ್ತ ನಿರ್ದೇಶನಗಳನ್ನು ನೀಡಲು ಸೂಚಿಸಿದರು.

2. ನೀರು ಶುದ್ಧೀಕರಣ ಘಟಕಗಳನ್ನು ಅಳವಡಿಸಲು ಸಂಗ್ರಹಣಾ ಮುಂಗಡ (Mobilization Advance)ವನ್ನು ಬಿಡುಗಡೆ ಮಾಡಿದ ನಂತರ, ಭಾಗಶಃ ಬಿಲ್ಲುಗಳನ್ನು ಗುತ್ತಿಗೆದಾರರಿಗೆ ಪಾವತಿ ಮಾಡಿ, ನೀರು ಶುದ್ಧೀಕರಣ ಘಟಕಗಳ ಅನುಷ್ಠಾನವನ್ನು ಶೀಘ್ರವಾಗಿ ಅಂದರೆ **ಜೂನ್ 2016**ರ ಅಂತ್ಯದೊಳಗೆ ಪೂರ್ಣಗೊಳಿಸಲು ಸೂಚನೆ ನೀಡಲಾಯಿತು.

3. ಪ್ರತಿ 10 ದಿನಗಳಿಗೊಮ್ಮೆ ನೀರು ಶುದ್ಧೀಕರಣ ಘಟಕಗಳ ಪ್ರಗತಿ ವಿವರಗಳನ್ನು ಮಾನ್ಯ ಸಚಿವರಿಗೆ ಸಲ್ಲಿಸುವಂತೆ ಸೂಚಿಸಲಾಯಿತು.

**ಕೆ.ಆರ್.ಐ.ಡಿ.ಎಲ್. ಸಂಸ್ಥೆ:**

ಕೆ.ಆರ್.ಐ.ಡಿ.ಎಲ್ ಸಂಸ್ಥೆ ಮುಖೇನ ಅನುಷ್ಠಾನಗೊಳಿಸಲಾಗುತ್ತಿರುವ ನೀರು ಶುದ್ಧೀಕರಣ ಘಟಕಗಳ ಪ್ರಗತಿ ವಿವರಗಳನ್ನು ಕೆ.ಆರ್.ಐ.ಡಿ.ಎಲ್. ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರು ಸಭೆಗೆ ತಿಳಿಸಿದರು. ಈಗಾಗಲೇ **1021** ನೀರು ಶುದ್ಧೀಕರಣ ಘಟಕಗಳನ್ನು ಲೋಕಾರ್ಪಣೆ ಮಾಡಲಾಗಿದ್ದು, ಈಗಾಗಲೇ ಕಾರ್ಯಾಚರಣೆಯಲ್ಲಿರುವ ನೀರು ಶುದ್ಧೀಕರಣ ಘಟಕಗಳ ಮುಂದಿನ ನಿರ್ವಹಣೆಯ ಜವಾಬ್ದಾರಿಯನ್ನು ಗ್ರಾಮ ಪಂಚಾಯಿತಿಗಳಿಗೆ ವಹಿಸುವ ಬಗ್ಗೆ ಕೇಂದ್ರ ಕಛೇರಿಯಿಂದ ಸೂಕ್ತ ನಿರ್ದೇಶನ ನೀಡಲು ಕೋರಿದರು. ಅದರಂತೆ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸಂಬಂಧಪಟ್ಟ ಗ್ರಾಮ ಪಂಚಾಯಿತಿಗಳಿಗೆ ಸೂಕ್ತ ನಿರ್ದೇಶನ ನೀಡಿ ಒಂದು ವಾರದಲ್ಲಿ ಹಸ್ತಾಂತರ ಮಾಡಿಕೊಂಡು ಹಾಗೂ ಅನುಷ್ಠಾನ ಮಾಡಿರುವ ಏಜೆನ್ಸಿಗಳೊಂದಿಗೆ ವಾರ್ಷಿಕ ನಿರ್ವಹಣೆ ಗುತ್ತಿಗೆ ಕರಾರು (AMC) ಮಾಡಿಕೊಂಡು ನಿರ್ವಹಣೆ ಮಾಡುವ ಬಗ್ಗೆ ಸೂಕ್ತ ನಿರ್ದೇಶನ ನೀಡಲು ಕ್ರಮವಹಿಸುವಂತೆ ಮತ್ತು ಹಾಲಿ ಗ್ರಾಮ ಪಂಚಾಯಿತಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೀರುಗಂಟಿ (Watermen)ಗಳಿಗೆ ನೀರು ಶುದ್ಧೀಕರಣ ಘಟಕಗಳ ನಿರ್ವಹಣೆ ಬಗ್ಗೆ ತರಬೇತಿಗಳಿಗೆ ಹಾಜರಾಗಲು ಸೂಚನೆ ನೀಡಲು ತೀರ್ಮಾನಿಸಲಾಯಿತು.

ನೀರು ಶುದ್ಧೀಕರಣ ಘಟಕಗಳಿಗೆ ಕಚ್ಚಾ ನೀರು ಒದಗಿಸುವ ಪೈಪ್‌ಲೈನ್ ವ್ಯವಸ್ಥೆಯನ್ನು ಸ್ಥಳೀಯ ಗ್ರಾಮಪಂಚಾಯಿತಿಯು ಒದಗಿಸತಕ್ಕದ್ದು, ಒಂದು ವೇಳೆ ಸದರಿ ಕಾಮಗಾರಿಗಳನ್ನು ಕೆಆರ್‌ಐಡಿಎಲ್ ಸಂಸ್ಥೆಯು ನಿರ್ವಹಿಸಿದಲ್ಲಿ ಈ ಸಂಬಂಧದ ವೆಚ್ಚವನ್ನು ಕೆಆರ್‌ಐಡಿಎಲ್ ಸಂಸ್ಥೆಗೆ ಸಂಬಂಧಪಟ್ಟ ಗ್ರಾಮ ಪಂಚಾಯತ್ / ತಾಲ್ಲೂಕು ಪಂಚಾಯತ್ / ಜಿಲ್ಲಾ ಪಂಚಾಯತ್‌ಯಿಂದ ನೇರವಾಗಿ ಭರಿಸತಕ್ಕದ್ದು. ಇದಕ್ಕೆ ಹೊಂದಾಣಿಕೆಯ ಮೊತ್ತದ ಪ್ರಸ್ತಾವನೆಯನ್ನು ಕೆಆರ್‌ಐಡಿಎಲ್ ಸಂಸ್ಥೆಯು ಸಂಬಂಧಪಟ್ಟ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸಲ್ಲಿಸಲು ತಿಳಿಸಲಾಯಿತು.

ಟೆಂಡರ್ ಪ್ರಕ್ರಿಯೆಯಲ್ಲಿರುವ **762** ನೀರು ಶುದ್ಧೀಕರಣ ಘಟಕಗಳನ್ನು ಅನುಷ್ಠಾನಗೊಳಿಸಲು ಕೆಆರ್‌ಐಡಿಎಲ್ ಸಂಸ್ಥೆಗೆ ವಹಿಸುವ ಕ್ರಮ ಜರುಗಿಸುವ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲು ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಇವರಿಗೆ ಸೂಚಿಸಲಾಯಿತು.

ಕೆ.ಆರ್.ಐ.ಡಿ.ಎಲ್. ಸಂಸ್ಥೆಯಿಂದ ಎರಡನೇ ಹಂತದಲ್ಲಿ ಕಿಯೋಸ್ಕ್ ಮಾದರಿಯಲ್ಲಿ **1302** ನೀರು ಶುದ್ಧೀಕರಣ ಘಟಕಗಳ ಅನುಷ್ಠಾನ ಮಾಡಲು ಆದೇಶವಾಗಿದ್ದು, ಈ ಪೈಕಿ 1222 ನಿವೇಶನಗಳನ್ನು ಗುರುತಿಸಲಾಗಿರುತ್ತದೆಂದು ತಿಳಿಸಲಾಯಿತು. 1302 ನೀರು ಶುದ್ಧೀಕರಣ ಘಟಕಗಳ ಬದಲಾಗಿ **ಹೆಚ್ಚುವಾರಿಯಾಗಿ** 152 ನೀರು ಶುದ್ಧೀಕರಣ ಘಟಕಗಳನ್ನು ಅನುಷ್ಠಾನ ಮಾಡಲು ಅಂದರೇ **ಒಟ್ಟಾರೆ ಕಿಯೋಸ್ಕ್ ಮಾದರಿಯಲ್ಲಿ 1454** ನೀರು ಶುದ್ಧೀಕರಣ ಘಟಕಗಳನ್ನು ಅನುಷ್ಠಾನ ಮಾಡಲು ಅನುಮೋದನೆ ನೀಡಲಾಯಿತು.

ಕೆ.ಆರ್.ಐ.ಡಿ.ಎಲ್.ಸಂಸ್ಥೆ ಮುಖೇನ ಈಗಾಗಲೇ ಅನುಮೋದನೆ ನೀಡಿರುವ **1054** ನೀರು ಶುದ್ಧೀಕರಣ ಘಟಕಗಳ ಜೊತೆಗೆ **ಹೆಚ್ಚುವರಿಯಾಗಿ** 19 ನೀರು ಶುದ್ಧೀಕರಣ ಘಟಕಗಳನ್ನು ಅನುಷ್ಠಾನ ಮಾಡಲು ಅಂದರೇ **ಒಟ್ಟಾರೆ 1073** ನೀರು ಶುದ್ಧೀಕರಣ ಘಟಕಗಳನ್ನು ಅನುಷ್ಠಾನ ಮಾಡಲು ಅನುಮೋದನೆ ನೀಡಲಾಯಿತು.

ಕೆ.ಆರ್.ಐ.ಡಿ.ಎಲ್.ಸಂಸ್ಥೆರವರಿಗೆ 1054 ನೀರು ಶುದ್ಧೀಕರಣ ಘಟಕಗಳ ಅನುಷ್ಠಾನ ಮಾಡಲು ರೂ.75.785 ಕೋಟಿಯ ಅಂದಾಜಿನ ಮೊತ್ತದಲ್ಲಿ ಈಗಾಗಲೇ ರೂ.26.905ಕೋಟಿ ಅನುದಾನವನ್ನು ಬಿಡುಗಡೆ ಮಾಡಲಾಗಿದ್ದು, ಬಾಕಿ ಉಳಿದ ಅನುದಾನವನ್ನು ಬಿಡುಗಡೆ ಮಾಡಲು ಅಗತ್ಯ ಕ್ರಮವಹಿಸುವಂತೆ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆರವರಿಗೆ ಹಾಗೂ ಆಯುಕ್ತರು, ಗ್ರಾ.ಕು.ನೀ.&ನೈ.ಇಲಾಖೆರವರಿಗೆ ಸೂಚಿಸಲಾಯಿತು.

ಕೆ.ಆರ್.ಐ.ಡಿ.ಎಲ್.ಸಂಸ್ಥೆರವರಿಗೆ ಕಿಯೋಸ್ಕ್ ಮಾದರಿಯಲ್ಲಿ 1302 ನೀರು ಶುದ್ಧೀಕರಣ ಘಟಕಗಳ ಅನುಷ್ಠಾನ ಮಾಡಲು ರೂ.63.66ಕೋಟಿಯ ಅನುಷ್ಠಾನದ ವೆಚ್ಚವನ್ನು ಬಿಡುಗಡೆ ಮಾಡಲು ಅಗತ್ಯ ಕ್ರಮವಹಿಸುವಂತೆ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆರವರಿಗೆ ಹಾಗೂ ಆಯುಕ್ತರು, ಗ್ರಾ.ಕು.ನೀ&ನೈ.ಇಲಾಖೆರವರಿಗೆ ನಿರ್ದೇಶನ ನೀಡಲಾಯಿತು.

ಈಗಾಗಲೇ 1054 ನೀರು ಶುದ್ಧೀಕರಣ ಘಟಕಗಳನ್ನು ಲೋಕಾರ್ಪಣೆ ಮಾಡಲಾಗಿದ್ದು, ಈ ಎಲ್ಲಾ ನೀರು ಶುದ್ಧೀಕರಣ ಘಟಕಗಳ ವಿವರವನ್ನು ದಿನಾಂಕ:15/06/16ರೊಳಗೆ ಇಲಾಖೆಯ **www.shuddhaneeru7000.com** ವೆಬ್‌ಸೈಟ್‌ನಲ್ಲಿ ಅಳವಡಿಸಲು ಸೂಚನೆ ನೀಡಲಾಯಿತು.

ಕೆ.ಆರ್.ಐ.ಡಿ.ಎಲ್.ಸಂಸ್ಥೆರು ಅನುಷ್ಠಾನ ಮಾಡುತ್ತಿರುವ ಎಲ್ಲಾ ನೀರು ಶುದ್ಧೀಕರಣ ಘಟಕಗಳನ್ನು **ದಿನಾಂಕ:15.06.2016ರೊಳಗೆ** ಅನುಷ್ಠಾನ ಮಾಡಿ ಲೋಕಾರ್ಪಣೆ ಮಾಡಲು ಸೂಚಿಸಿದರು.

**<u>ಗ್ರಾಮ ನೀರು ಸರಬರಾಜು ಮತ್ತು ನೈರ್ಮಲ್ಯ ಸಮಿತಿ (VWSC)ಯ ಕುರಿತು:</u>**

ಈಗಾಗಲೇ ಅಸ್ತಿತ್ವದಲ್ಲಿರುವ ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿ (VWSC)ಗಳ ಮುಖಾಂತರ ನೀರು ಶುದ್ಧೀಕರಣ ಘಟಕಗಳ ನಿರ್ವಹಣೆ ಮಾಡುವಂತೆ ಸಂಬಂಧಪಟ್ಟ ಗ್ರಾಮ ನೀರು ಸರಬರಾಜು ಮತ್ತು ನೈರ್ಮಲ್ಯ ಸಮಿತಿಗಳಿಗೆ ತರಬೇತಿ ನೀಡಲು ಮತ್ತು ಕಾರ್ಯಾಚರಣೆ ಮತ್ತು ಮೇಲ್ವಿಚಾರಣೆ (O&M) ಮೊತ್ತವನ್ನು ವರ್ಗಾಯಿಸಿ, ಇವುಗಳ ಉಸ್ತುವಾರಿಯನ್ನು ಗ್ರಾಮ ನೀರು ಸರಬರಾಜು ಮತ್ತು ನೈರ್ಮಲ್ಯ ಸಮಿತಿಗಳಿಗೆ ಹಸ್ತಾಂತರಿಸಲು ತೀರ್ಮಾನಿಸಲಾಯಿತು.

ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಿ, ನೀರು ಶುದ್ಧೀಕರಣ ಬಿಡುಗಡೆ ಮಾಡಿರುವ ಅನುದಾನದ ಹೊಂದಾಣಿಕೆ ಮೊತ್ತವನ್ನು ಸಂಗ್ರಹಿಸಿ, ಕೆ.ಆರ್.ಐ.ಡಿ.ಎಲ್. ಸಂಸ್ಥೆಗೆ ವರ್ಗಾಯಿಸುವಂತೆ ತಿಳಿಸಲು ತೀರ್ಮಾನಿಸಲಾಯಿತು, ರೂ.75.78ಕೋಟಿಗಳ ಅವಶ್ಯಕತೆ ಇದ್ದು, ಈ ಪೈಕಿ ರೂ.55.94ಕೋಟಿಗಳನ್ನು NRDWPಯಡಿ ಪಾವತಿಸಬೇಕಾಗಿದ್ದು, ಸುಮಾರು ರೂ.20.00ಕೋಟಿಗಳ ಅನುದಾನವನ್ನು ವಂತಿಗೆ ರೂಪದಲ್ಲಿ ಜಿಲ್ಲಾ ಪಂಚಾಯಿತ್‌ಗಳು ಮಾನ್ಯ ಶಾಸಕರ ಸ್ಥಳೀಯ ಪ್ರದೇಶ ಅಭಿವೃದ್ಧಿ ನಿಧಿ, ಪಾರ್ಲಿಮೆಂಟ್ ಸದಸ್ಯರ ಸ್ಥಳೀಯ ಪ್ರದೇಶ ಅಭಿವೃದ್ಧಿ ನಿಧಿ, 13/14ನೇ ಹಣಕಾಸು ಆಯೋಗದ ಅನುದಾನ, ತಾಲ್ಲೂಕು, ಜಿಲ್ಲಾ ಪಂಚಾಯತ್‌ಗಳಲ್ಲಿ ಉಳಿದಿರುವ ಅನುದಾನ, ಕಾರ್ಪೋರೇಟ್ ಸೋಶಿಯಲ್ ರೆಸ್ಪಾನ್ಸಿಬಿಲಿಟಿ, ಹೆಚ್.ಕೆ.ಡಿ.ಬಿ. ಹಾಗೂ ರಾಜ್ಯ ಹಣಕಾಸು ಆಯೋಗ ವತಿಯಿಂದ ಹಾಗೂ ಇನ್ನಿತರೆ ಮೂಲಗಳಿಂದ ಹೊಂದಾಣಿಕೆ ಮಾಡಿಕೊಂಡು ಕೆ.ಆರ್.ಐ.ಡಿ.ಎಲ್. ಸಂಸ್ಥೆ ಮತ್ತು ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಇವರು ವಿವರಣಾ ಪಟ್ಟಿಯನ್ನು ಆಯುಕ್ತರಿವರಿಗೆ ಸಲ್ಲಿಸುವಂತೆ ತಿಳಿಸಲಾಯಿತು.

ನೀರು ಶುದ್ಧೀಕರಣ ಘಟಕಗಳ ಅನುಷ್ಠಾನಕ್ಕೆ ಸಂಬಂಧಪಟ್ಟಂತೆ ಕಳೆದ ಸಾಲಿನಲ್ಲಿ ಮಾನ್ಯ ಮುಖ್ಯಮಂತ್ರಿಗಳ ಬಜೆಟ್ ಭಾಷಣದಲ್ಲಿ **ರೂ.200.00ಕೋಟಿ**ಗಳನ್ನು ಬಿಡುಗಡೆ ಮಾಡಲು ಉದ್ದೇಶಿಸಲಾಗಿದ್ದು, ಈ ಪೈಕಿ ರೂ.75.00 ಕೋಟಿಗಳನ್ನು ಬಿಡುಗಡೆ ಮಾಡಲಾಗಿರುತ್ತದೆ ಮತ್ತು ಉಳಿದ ರೂ.125.00ಕೋಟಿ ರೂ.ಗಳ ಅನುದಾನವನ್ನು ಬಿಡುಗಡೆ ಮಾಡಲು ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲು ಮುಖ್ಯ ಲೆಕ್ಕಾಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಇವರಿಗೆ ತಿಳಿಸಲಾಯಿತು.

ನೀರು ಶುದ್ಧೀಕರಣ ಘಟಕಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕೇಂದ್ರ ಮತ್ತು ರಾಜ್ಯದ ಪಾಲನ್ನು ನಿಯಮಾನುಸಾರ ಬಳಕೆ ಮಾಡಿಸಿಕೊಳ್ಳಲು ಸೂಕ್ತ ಕ್ರಮ ವಹಿಸುವಂತೆ ತಿಳಿಸಲಾಯಿತು. ಈ ಸಂದರ್ಭದಲ್ಲಿ ಕೇಂದ್ರದ ಪಾಲಿನ ಮೊತ್ತವನ್ನು Coverage & Quality ಅಡಿ ಹಾಗೂ ಶೇಕಡಾ 5ರಷ್ಟು Earmarked Fund ಅಡಿಯಲ್ಲಿ ಲಭ್ಯವಿರುವ ಅನುದಾನವನ್ನು ನೀತಿ ಆಯೋಗದ ವತಿಯಿಂದ ನೀರು ಶುದ್ಧೀಕರಣ ಘಟಕಗಳ ಅನುಷ್ಠಾನಕ್ಕೆ ಬಿಡುಗಡೆ ಮಾಡಲು ಕ್ರಿಯಾ ಯೋಜನೆ ತಯಾರಿಸುವಂತೆ ತೀರ್ಮಾನಿಸಲಾಯಿತು.

**ಸಹಕಾರ ಸಂಘ/ಸಂಸ್ಥೆಗಳು:**

ಸಹಕಾರ ಇಲಾಖೆಗೆ 2015-16ನೇ ಸಾಲಿನಲ್ಲಿ 1000 ನೀರು ಶುದ್ಧೀಕರಣ ಘಟಕಗಳನ್ನು ಅನುಷ್ಠಾನ ಮಾಡಲು ವಹಿಸಲಾಗಿರುತ್ತದೆ. ಈ ಸಂದರ್ಭದಲ್ಲಿ ಶ್ರೀ ಕರಿಬಸಪ್ಪ, ಅಪರ ನಿಬಂಧಕರು, ಸಹಕಾರ ಇಲಾಖೆ, ಇವರು ಹಾಜರಿದ್ದು, ಪ್ರಗತಿ ಬಗ್ಗೆ ವಿವರಿಸಿದರು. ಒಟ್ಟು 972 ನೀರು ಶುದ್ಧೀಕರಣ ಘಟಕಗಳನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಈ ಪೈಕಿ **111** ನೀರು ಶುದ್ಧೀಕರಣ ಘಟಕಗಳನ್ನು ಲೋಕಾರ್ಪಣೆ ಮಾಡಲಾಗಿರುತ್ತದೆಂದು ಮತ್ತು ಉಳಿದ ಎಲ್ಲಾ ನೀರು ಶುದ್ಧೀಕರಣ ಘಟಕಗಳನ್ನು **2016ರ ಜೂನ್ ಅಂತ್ಯದೊಳಗೆ** ಮುಕ್ತಾಯಗೊಳಿಸುವುದಾಗಿ ತಿಳಿಸಿದರು. ಸರ್ಕಾರದಿಂದ ಒದಗಿಸಲಾಗಿರುವ ಅನುದಾನದೊಂದಿಗೆ ಹೆಚ್ಚುವರಿ ಅನುದಾನವನ್ನು ಸಹಕಾರ ಸಂಸ್ಥೆಗಳಿಗೆ ಒದಗಿಸಿಕೊಳ್ಳುವಂತೆ ತಿಳಿಸಿದರು.

ಇದುವರೆವಿಗೂ ವಿವಿದ ಮಾದರಿಯಲ್ಲಿ ನೀರು ಶುದ್ಧೀಕರಣ ಘಟಕಗಳ ಅನುಷ್ಠಾನ ಮಾಡಿರುವ ಕುರಿತು ಸಾಮಾಜಿಕ ಪರಿಶೋಧನೆಯನ್ನು ಕೈಗೊಳ್ಳಲು ತೀರ್ಮಾನಿಸಲಾಯಿತು. ಇದಕ್ಕೆ ಸಂಬಂಧಪಟ್ಟಂತೆ ಸಾಮಾಜಿಕ ಪರಿಶೋಧಕರನ್ನು ನಿಯೋಜಿಸಿ, ಪ್ರತಿ ತಿಂಗಳು 2 ರಿಂದ 3 ಬಾರಿ ಸಾಮಾಜಿಕ ಪರಿಶೋಧನೆ ಮಾಡಲು ಮತ್ತು ಅವರಿಂದ ನೀರು ಶುದ್ಧೀಕರಣ ಘಟಕಗಳ ಅನುಷ್ಠಾನ ಮತ್ತು ನಿರ್ವಹಣೆ ಬಗ್ಗೆ ವರದಿಯನ್ನು ಪಡೆದುಕೊಳ್ಳಲು ತೀರ್ಮಾನಿಸಲಾಯಿತು.

**ಇತರೆ ವಿಷಯಗಳು:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಇವರ ಅಧ್ಯಕ್ಷತೆಯ SLSSC ಸಭೆಗೆ ಮಂಡಿಸಲಾಗುವ ವಿಷಯಗಳ ಟಿಪ್ಪಣಿಯನ್ನು / ವಿಷಯ ಸೂಚಿಯನ್ನು ಮುಂಚಿತವಾಗಿ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಅವಗಾಹನೆಗೆ ತರಲು ಮುಖ್ಯ ಇಂಜಿನಿಯರ್, ಗ್ರಾ.ಕು.ನೀ&ನೈ.ಇಲಾಖೆರವರಿಗೆ ಸೂಚಿಸಿದರು.

(ಬಿ. ಕೃಷ್ಣಪ್ಪ)
ಸರ್ಕಾರದ ಉಪ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

**ಪ್ರತಿಗಳು:**

1. ಆಯುಕ್ತರು ಹಾಗೂ ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆರವರ ಮಾಹಿತಿಗಾಗಿ
2. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆರವರ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ, ಗ್ರಾಮೀಣಾಭಿವೃದ್ಧಿ ಭವನ, ಆನಂದ ರಾವ್ ವೃತ್ತ, ಬೆಂಗಳೂರು-09.
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
5. ಮುಖ್ಯ ಲೆಕ್ಕಾಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆರವರ ಮಾಹಿತಿಗಾಗಿ
6. ಸಹಕಾರ ಸಂಘಗಳ ಅಪರ ನಿಬಂಧಕರು, ಸಹಕಾರ ಇಲಾಖೆ (ಇಂಡಸ್ಟ್ರೀಯಲ್ & ಡೈರಿ), ಡಾ. ಆಲಿ ಅಸ್ಗರ್ ರಸ್ತೆ, ವಸಂತನಗರ, ಬೆಂಗಳೂರು-52.
7. ಸಹಕಾರ ಸಂಘಗಳ ಅಪರ ನಿಬಂಧಕರು, ಸಹಕಾರ ಇಲಾಖೆ. (ಪತ್ತು), ಡಾ. ಆಲಿ ಅಸ್ಗರ್ ರಸ್ತೆ, ವಸಂತನಗರ, ಬೆಂಗಳೂರು-52.
8. ರಾಜ್ಯದ ಎಲ್ಲಾ (30) ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
9. ರಾಜ್ಯದ ಎಲ್ಲಾ (4) ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತಗಳ ಅಧೀಕ್ಷಕ ಅಭಿಯಂತರರು,
10. ರಾಜ್ಯದ ಎಲ್ಲಾ (30) ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳ ಕಾರ್ಯಪಾಲಕ ಇಂಜಿನಿಯರ್‌ಗಳು.
11. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತಶಾಖೆಗೆ.



100